ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ
ಬೆಂಗಳೂರು, ದಿನಾಂಕ:28-01-2022

## ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:17.01.2022 ಮತ್ತು ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಉಲ್ಲೇಖಿತ ದಿನಾಂಕ:17.01.2022 ರ ಈ ಕಛೇರಿಯ ಸುತ್ತೋಲೆಯಂತೆ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಪಡೆದು, ವಿಷಯವಾರು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಕಾಲೇಜುಗಳಲ್ಲಿ ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ದಿನಾಂಕ:27.01.2022 ರಿಂದ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಿದ್ದು, ಅಭ್ಯರ್ಥಿಗಳು ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಆಯ್ಕೆ ಮಾಡಿಕೊಂಡ ಕಾಲೇಜುಗಳ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ. ಎಲ್ಲಾ ಪ್ರಾಂಶುಪಾಲರು ಉಲ್ಲೇಖಿತ ದಿನಾಂಕ:28.01.2022 ರ ಈ ಕಛೇರಿಯ ಸುತ್ತೋಲೆಯಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಕಾಲೇಜಿನಲ್ಲಿ ಲಭ್ಯವಿರವ ಕಾರ್ಯಭಾರಕ್ಕೆ ತಕ್ಕಂತೆ ಆಯ್ಕೆ ಪಟ್ಟಿ ಪ್ರಕಟಗೊಂಡ ಎರಡು ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರುಪಡಿಸಿಕೊಂಡು ಅದೇ ದಿನ EMIS ನಲ್ಲಿ ಅಪ್ ಲೋಡ್ ಮಾಡಲು ಸೂಚಿಸಲಾಗಿದೆ.

ಅಭ್ಯರ್ಥಿಗಳ ವಿದ್ಯಾರ್ಹತೆ ಹಾಗೂ ಸೇವಾ ಅವಧಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳಲ್ಲಿ ನ್ಯೂನ್ಯತೆ/ವ್ಯತ್ಯಾಸ ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳಬಾರದು ಹಾಗೂ ಸದರಿಯವರ ವಿವರಗಳನ್ನು EMIS ನಲ್ಲಿ ಪ್ರತ್ಯೇಕವಾಗಿ ಅಪ್ ಲೋಡ್ ಮಾಡಲು ಸೂಚಿಸಲಾಗಿದೆ.

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.